# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1471 |
| 2 | ಸದಸ್ಯರ ಹೆಸರು | : | ಶ್ರೀ ಗೋವಿಂದರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 20-03-2025 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದ ಓಕಳಿಪುರಂನಿಂದ ರೈಲ್ವೆ ನಿಲ್ದಾಣದವರೆಗೂ ನಿರ್ಮಾಣ ಮಾಡಲಾಗಿರುವ ಅಷ್ಟಪಥ ರಸ್ತೆಯ ಕಾಮಗಾರಿಯು ಎಂದು ಪ್ರಾರಂಭವಾಯಿತು ಹಾಗೂ ಪ್ರಸ್ತುತ ಯಾವ ಹಂತದಲ್ಲಿದೆ; | • ಗುತ್ತಿಗೆದಾರರು: ಮೆ॥ ಸಿಂಪ್ಲೆಕ್ಸ್ ಇನ್‌ಫ್ರಾಸ್ಟ್ರಕ್ಚರ್ಸ್ ಲಿ.,<br>• ಕಾಮಗಾರಿ ಪ್ರಾರಂಭಗೊಂಡ ದಿನಾಂಕ: 01-07-2015.<br>• ಕಾಮಗಾರಿ ಪೂರ್ಣಗೊಳಿಸಲು ನೀಡಲಾದ ಕಾಲಾವಧಿ: 18 ತಿಂಗಳು.<br>• **ಕಾಮಗಾರಿಯ ಪ್ರಸ್ತುತ ಹಂತ:** ಭೂಸ್ವಾಧೀನ ಪ್ರಕ್ರಿಯೆ ಮತ್ತು ರೈಲ್ವೇ ಮಾರ್ಗದ ಕೆಳಭಾಗದಲ್ಲಿ ಕೆಳಸೇತುವೆಗಳನ್ನು ರೈಲ್ವೇ ಇಲಾಖೆಯ ವತಿಯಿಂದಲೇ ನಿರ್ಮಿಸಬೇಕಾಗಿರುವುದರಿಂದ ಗುತ್ತಿಗೆದಾರರಿಗೆ ನೀಡಲಾಗಿದ್ದ ಕಾಲಾವಧಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲು ಸಾಧ್ಯವಾಗಿರುವುದಿಲ್ಲ. |
| ಆ) | ಈ ಕಾಮಗಾರಿಯನ್ನು ಯಾವ ಯಾವ ಗುತ್ತಿಗೆದಾರರಿಗೆ ನೀಡಲಾಗಿತ್ತು; ಕಾಮಗಾರಿ ಪೂರ್ಣಗೊಳಿಸಲು ನೀಡಲಾದ ಕಾಲಾವಧಿ ಎಷ್ಟು; ನೀಡಲಾಗಿರುವ ಕಾಲಾವಧಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಿದ್ದಾರೆಯೇ; | |
| ಇ) | ಸರ್ಕಾರದ ನಿಯಮದಡಿ ಗುತ್ತಿಗೆದಾರರ ಮೇಲೆ ಯಾವ ಕ್ರಮ ತೆಗೆದುಕೊಳ್ಳಲಾಗುತ್ತದೆ; | ಗುತ್ತಿಗೆದಾರರು ಕಾಮಗಾರಿ ನಿರ್ವಹಿಸುವಲ್ಲಿ ವಿಳಂಬ ಮಾಡಿದ ಕಾರಣ ರೂ.56,63,972.00 ಗಳ ದಂಡವನ್ನು ವಿಧಿಸಲಾಗಿರುತ್ತದೆ. |
| ಈ) | ಈ ಯೋಜನೆಗೆ ಪ್ರಾರಂಭದಲ್ಲಿ ಎಷ್ಟು ಕೋಟಿ ರೂಪಾಯಿಗೆ ಟೆಂಡರ್‌ಗೆ ಅನುಮತಿ ನೀಡಲಾಗಿದೆ; ತದನಂತರ ಹೆಚ್ಚುವರಿಯಾಗಿ ಬಿಡುಗಡೆಯಾಗಿರುವ ಅನುದಾನದ ಮೊತ್ತವೆಷ್ಟು; (ಕಾರಣಗಳೊಂದಿಗೆ ಪೂರ್ಣ ವಿವರ ಒದಗಿಸುವುದು) | ಸದರಿ ಕಾಮಗಾರಿಗೆ ರೂ.102.83 ಕೋಟಿಗಳಿಗೆ ಸರ್ಕಾರದ ಆದೇಶ ಸಂಖ್ಯೆ:ನಅಇ 391 ಎಂಎನ್‌ವೈ 2012, ದಿನಾಂಕ:26-09-2012 ರಂದು ಟೆಂಡರ್‌ಗೆ ಅನುಮತಿ ನೀಡಲಾಗಿತ್ತು. ತದನಂತರ ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20-09-2019 ರಂದು ಅನುಬಂಧ-4ರ ಕ್ರ.ಸಂ (16) ರಲ್ಲಿ ರೂ.10.00 ಕೋಟಿಗಳ ಹೆಚ್ಚುವರಿ ಅನುದಾನವನ್ನು ಉಪಯುಕ್ತತೆಗಳ ಸ್ಥಳಾಂತರಿಸುವಿಕೆ, ಹೆಚ್ಚುವರಿ ಭೂಸ್ವಾಧೀನ ಪ್ರಕ್ರಿಯೆಗಾಗಿ ಭರಿಸಲು ಒದಗಿಸಲಾಗಿರುತ್ತದೆ. |

. . .2/-

| | | |
|---|---|---|
| ಉ) | ಈ ಯೋಜನೆಯು ಅವೈಜ್ಞಾನಿಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಒಂದು ಕಡೆಯಿಂದ ರಸ್ತೆ ದೊಡ್ಡದಾಗಿದ್ದು; ತದನಂತರ ರಸ್ತೆ ಕಿರಿದಾಗಿರುವುದರಿಂದ, ಟ್ರಾಫಿಕ್ ಜಾಮ್ ಆಗುತ್ತಿರುವುದು ಹಾಗೂ ಮಳೆಯ ನೀರಿನಿಂದ ಸಂಚಾರ ಮಾಡಲು ಕಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದರೆ, ಇದನ್ನು ಸರಿಪಡಿಸಲು ಯಾವ ಕ್ರಮ ತೆಗೆದುಕೊಳ್ಳಲಾಗಿದೆ? | • ಸದರಿ ಕಾಮಗಾರಿಯಲ್ಲಿನ ರೈಲ್ವೇ ಮಾರ್ಗದ ಕೆಳಭಾಗದ ಕೆಳಸೇತುವೆಗಳನ್ನು ರೈಲ್ವೆ ಇಲಾಖೆಯ ವತಿಯಿಂದಲೇ ನಿರ್ಮಿಸಬೇಕಾಗಿರುತ್ತದೆ.<br>• ಬೆಂಗಳೂರು-ತುಮಕೂರು ರೈಲ್ವೇ ಮಾರ್ಗದ ಕೆಳಭಾಗದಲ್ಲಿ ಈಗಾಗಲೇ ಒಟ್ಟು 6 ಕೆಳಸೇತುವೆಗಳನ್ನು ಪೂರ್ಣಗೊಳಿಸಲಾಗಿದ್ದು, ವಾಹನ ಸಂಚಾರಕ್ಕೆ ಮುಕ್ತಗೊಳಿಸಲಾಗಿರುತ್ತದೆ.<br>• ಬೆಂಗಳೂರು-ಚೆನ್ನೈ ರೈಲ್ವೇ ಮಾರ್ಗದ ಕೆಳಭಾಗದಲ್ಲಿ 2 ಕೆಳಸೇತುವೆಗಳನ್ನು ಪೂರ್ಣಗೊಳಿಸಿ ವಾಹನ ಸಂಚಾರಕ್ಕೆ ಮುಕ್ತಗೊಳಿಸಲಾಗಿದೆ.<br>• ಬಾಕಿ 2 ಕೆಳಸೇತುವೆಗಳ ನಿರ್ಮಾಣ ಕಾಮಗಾರಿಗಳು ಪೂರ್ಣಗೊಂಡಿದೆ.<br>• ಬೆಂಗಳೂರು ಸಿಟಿ ರೈಲ್ವೇ ನಿಲ್ದಾಣದ ಅಭಿವೃದ್ಧೀಕರಣ ಕಾಮಗಾರಿಯ ಅಂಗವಾಗಿ ಹೆಚ್ಚುವರಿ ರೈಲ್ವೇ ಮಾರ್ಗವನ್ನು ಅಳವಡಿಸುವ ಕಾಮಗಾರಿಗಳು ಪ್ರಗತಿಯಲ್ಲಿರುವುದರಿಂದ ಪೂರ್ಣಗೊಂಡ ಈ ರೈಲ್ವೇ ಕೆಳಸೇತುವೆಗಳಿಗೆ ಅಪ್ರೋಚ್ ರಸ್ತೆ ನಿರ್ಮಾಣವನ್ನು ಕೈಗೊಳ್ಳಲು ಸಾಧ್ಯವಾಗುತ್ತಿರುವುದಿಲ್ಲ.<br>• ರೈಲ್ವೇ ಇಲಾಖೆಯ ವತಿಯಿಂದ ಬಾಕಿ ಇರುವ ಇತರೇ ಕಾಮಗಾರಿಗಳು ಪೂರ್ಣಗೊಂಡ ನಂತರ ಟ್ರಾಫಿಕ್ ಜಾಮ್ ಸಮಸ್ಯೆಯು ನಿವಾರಣೆಯಾಗುತ್ತದೆ.<br>• ಮಳೆ ನೀರಿನ ಸಮಸ್ಯೆಯನ್ನು ಪರಿಹರಿಸಲು ಈಗಾಗಲೇ ಬೆಂಗಳೂರು-ಚೆನ್ನೈ ರೈಲ್ವೇ ಮಾರ್ಗದ ಕೆಳಭಾಗದಲ್ಲಿ 1200 ಮಿ.ಮೀ. ವ್ಯಾಸದ ಎನ್.ಪಿ-4 ಕೊಳವೆಗಳನ್ನು ಅಳವಡಿಸಿ ಬೃಹತ್ ನೀರುಗಾಲುವೆಗೆ ಸಂಪರ್ಕಿಸುವ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ. |

**ನಅಇ 175 ಎಂಎನ್‌ವೈ 2025**

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ